ಆ) ತೆರವಿರುವ ಎಲ್ಲಾ ಹುದ್ದೆಗಳನ್ನು ತುಂಬಲು ಕ್ರಮ ಕೈಗೊಳ್ಳಲಾಗಿದೆ. ಇದಲ್ಲದೆ ಪ್ರಾಥಮಿಕ ಶಾಲೆಗಳಲ್ಲಿ 8ನೇ ಪಂಚವಾರ್ಷಿಕ ಯೋಜನೆಯಲ್ಲಿ ಒಟ್ಟು 20,000 ಹೆಚ್ಚುವರಿ ಹುದ್ದೆಗಳನ್ನು ಮಂಜೂರು ಮಾಡಲಾಗುವುದು. ಈಗಾಗಲೇ 10,000 ಹೆಚ್ಚುವರಿ ಹುದ್ದೆಗಳನ್ನು ಮಂಜೂರು ಮಾಡಲಾಗಿದೆ. ಇವುಗಳ ಪೈಕಿ 5,000 ಹುದ್ದೆಗಳನ್ನು ಈಗಾಗಲೇ ತುಂಬಲಾಗಿದೆ. ಇನ್ನು 5,000 ಹೆಚ್ಚುವರಿ ಹುದ್ದೆಗಳನ್ನು ಮತ್ತು ತೆರವಿರುವ ಎಲ್ಲಾ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳನ್ನು ತುಂಬಲಾಗುವುದು. ಹಾಗೆಯೇ ಫ್ರೌಢ ಶಾಲೆಗಳಲ್ಲಿ ತೆರವಿರುವ ಎಲ್ಲಾ ಹುದ್ದೆಗಳನ್ನು ತುಂಬಲು ಕ್ರಮ ಕೈಗೊಳ್ಳಲಾಗುವುದು.

ಇ) ಮಂಡ್ಯ ಜಿಲ್ಲೆಯಲ್ಲಿ 122 ಹೆಚ್ಚುವರಿ ಪ್ರಾಥಮಿಕ ಶಿಕ್ಷಕರ ಹುದ್ದೆಗಳನ್ನು ಮಂಜೂರು ಮಾಡಲಾಗಿದೆ. ತೆರವಿರುವ ಎಲ್ಲಾ ಹುದ್ದೆಗಳ ಜೊತೆಗೆ ಹೆಚ್ಚುವರಿ ಹುದ್ದೆಗಳನ್ನು ಸಹ ತುಂಬಲಾಗುವುದು. ಫ್ರೌಢ ಶಾಲೆಗಳಲ್ಲಿ 211 ಹುದ್ದೆಗಳು ಖಾಲಿ ಇದ್ದು, ಈ ಎಲ್ಲಾ ಹುದ್ದೆಗಳನ್ನು ತುಂಬಲು ಕ್ರಮ ಕೈಗೊಳ್ಳಲಾಗುವುದು.

ವಿಷಯ:- ಮಂಗಳೂರಿನ ವೆನ್‌ಲಾಕ್ ಮತ್ತು ಲೇಡಿಗೋಷನ್ ಆಸ್ಪತ್ರೆಗಳಲ್ಲಿ ಖಾಲಿ ಇರುವ ಹುದ್ದೆಗಳು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 261(414)

ಶ್ರೀ ಎನ್.ಯೋಗೀಶ್ ಭಟ್(ಮಂಗಳೂರು):- ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಗಳೂರಿನ ವೆನ್‌ಲಾಕ್ ಹಾಗೂ ಲೇಡಿಗೋಷನ್ ಆಸ್ಪತ್ರೆಗಳಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳೆಷ್ಟು?

ಆ) ಇವುಗಳನ್ನು ಭರ್ತಿ ಮಾಡಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು ಹಾಗೂ ಯಾವಾಗ ಭರ್ತಿ ಮಾಡಲಾಗುವುದು?

ಡಾ: ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):-

ಅ) ವೆನ್‌ಲಾಕ್ ಆಸ್ಪತ್ರೆ — 63
ಲೇಡಿಗೋಷನ್ ಆಸ್ಪತ್ರೆ — 12

ಆ) ಈ ಹುದ್ದೆಗಳನ್ನು ಮುಂದೆ ಸ್ನಾತಕೋತ್ತರ ವ್ಯಾಸಂಗ ಮುಗಿಸಿ, ಹಿಂದಿರುಗುವ

ವೈದ್ಯರಿಂದ ಅಥವಾ ಮುಂಬರುವ ಸಾಮಾನ್ಯ ವರ್ಗಾವಣೆಯ ಸಮಯದಲ್ಲಿ ತುಂಬಲಾಗುವುದು.

ವಿಷಯ:- ರಾಜ್ಯದಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 262(161)

ಶ್ರೀ ವಸಂತ ಟಿ.ಸಾಲಿಯಾನ(ಕಾಪು) :- ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ರಾಜ್ಯದಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು?
2) ಈ ಪದವಿ ಪೂರ್ವ ಕಾಲೇಜುಗಳಲ್ಲಿ ಎಷ್ಟು ಉಪನ್ಯಾಸಕರುಗಳ ಕೊರತೆ ಇದೆ? ಜಿಲ್ಲಾವಾರು ವಿವರ ನೀಡುವುದು.
3) ಇನ್ನಿತರ ಸಿಬ್ಬಂದಿ ಕೊರತೆ ಎಷ್ಟು ಇದೆ?
4) ಇವುಗಳನ್ನು ಸರ್ಕಾರದವರು ಯಾವಾಗ ಭರ್ತಿ ಮಾಡುವುದು?

ಶ್ರೀ ಹೆಚ್.ಜಿ.ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು):-

1) ಒಟ್ಟು ಸಂಖ್ಯೆ 630

2) ಪದವಿ ಪೂರ್ವ ಕಾಲೇಜುಗಳಲ್ಲಿ ಉಪನ್ಯಾಸಕರುಗಳ ಕೊರತೆ ಒಟ್ಟು 864 (ಜಿಲ್ಲಾವಾರು ಪಟ್ಟಿಯನ್ನು ಲಗತ್ತಿಸಿದೆ).

3) ಪ್ರಾಂಶುಪಾಲರ ಕೊರತೆ ಒಟ್ಟು 103

4) ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರುಗಳ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಸಲುವಾಗಿ ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿದೆ. ಸದರಿ ಇಲಾಖೆಯ ಸಹಮತಿ ಬಂದ ನಂತರ ಆಯ್ಕೆ ಪ್ರಕ್ರಿಯೆಗೆ ಲೋಕ ಸೇವಾ ಆಯೋಗಕ್ಕೆ ಬರೆಯಲಾಗುವುದು.

ಪ್ರಾಂಶುಪಾಲರ ಖಾಲಿ ಹುದ್ದೆಗಳನ್ನು ಮುಂಬಡ್ತಿಯಿಂದ ಭರ್ತಿ ಮಾಡಬೇಕಾಗಿದ್ದು, ಅರ್ಹ ಉಪನ್ಯಾಸಕರುಗಳ ಮಾಹಿತಿ ತರಿಸಲು ಕ್ರಮ